ಬೀಡಿ ಕಾರ್ಮಿಕರ ಕಲ್ಯಾಣ ಯೋಜನೆ.

99 (122)

ಶ್ರೀ ಸದಾನಂದಗೌಡ ಡಿ.ವಿ. (ಪುತ್ತೂರು): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಬೀಡಿ ಕಾರ್ಮಿಕರ ಕಲ್ಯಾಣಕ್ಕೆ ಸರ್ಕಾರೆ ಹಮ್ಮಿಕೊಂಡಿರುವ ಯೋಜನೆಗಳೇನು?

ಆ) ಕಾರ್ಮಿಕ ಕಲ್ಯಾಣ ಆಸ್ಪತ್ರೆಗಳು ಇಲ್ಲದ ಕಡೆ ಕಾರ್ಮಿಕರ ವೈದ್ಯಕೀಯ ಚಿಕಿತ್ಸೆಗ ಅನುಕೂಲವಾಗಲು ಕೈಗೊಳ್ಳಲಾದ ಕ್ರಮಗಳೇನು?

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು):

ಅ) ಬೀಡಿ ಕಾರ್ಮಿಕರ ಕಾಯ್ದೆಯು ಕೇಂದ್ರೀಯ ಕಾಯ್ದೆಯಾಗಿದ್ದು, ಸದರಿ ಕಾಯ್ದೆಯಡಿ ಬೀಡಿ ಕಾರ್ಮಿಕರ ಕಲ್ಯಾಣಕ್ಕೆ ಸಂಬಂಧಪಟ್ಟಂತೆ ಕಾರ್ಯ ವ್ಯಾಪ್ತಿಯು ಕೇಂದ್ರ ಸರ್ಕಾರಕ್ಕಿದ್ದು ಕೇಂದ್ರ ಸರ್ಕಾರವು ಕೇಂದ್ರ ಕಲ್ಯಾಣ ಸಂಸ್ಥೆಗಳ ಮೂಲಕ ಬೀಡಿ ಕಾರ್ಮಿಕರ ಕಲ್ಯಾಣಕ್ಕಾಗಿ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದರಿಂದ ರಾಜ್ಯಸರ್ಕಾರವು ಪ್ರತ್ಯೇಕವಾದ ಯೋಜನೆಗಳನ್ನು ಹಾಕಿಕೊಂಡಿರುವುದಿಲ್ಲ, ಬೀಡಿ ಕಾರ್ಮಿಕರಿಗೆ ಕೇಂದ್ರ ಸರ್ಕಾರವು ಈ ಕೆಳಕಂಡಂತೆ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ.

1) ವೈದ್ಯಕೀಯ ಸೌಲಭ್ಯಗಳು.

2) ವಸತಿ ಯೋಜನೆ.

3) ಶೈಕ್ಷಣಿಕ ಮತ್ತು ಮನರಂಜನಾ ಸೌಲಭ್ಯಗಳು.

ಆ) ಕಾರ್ಮಿಕ ಕಲ್ಯಾಣ ಆಸ್ಪತ್ರೆಗಳು ಇಲ್ಲದ ಕಡೆ ಆಸ್ಪತ್ರೆಗಳನ್ನು ಸ್ಥಾಪಿಸುವ ವಿಷಯವು ಕೇಂದ್ರ ಸರ್ಕಾರದ ಕೇಂದ್ರ ಕಲ್ಯಾಣ ಸಂಸ್ಥೆ ನೋಡಿಕೊಳ್ಳುತ್ತದೆ.

ಪುತ್ತೂರು ಕ್ರೀಡಾಂಗಣಕ್ಕೆ ಹಣ ಮಂಜೂರು.

100(216)

ಶ್ರೀ ಸದಾನಂದಗೌಡ ಡಿ.ವಿ. (ಪುತ್ತೂರ): ಮಾನ್ಯ ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ಕ್ರೀಡಾಂಗಣಕ್ಕೆ ಈ ತನಕ ಮಂಜೂರಾದ ಮೊತ್ತವೆಷ್ಟು? ಖರ್ಚಾದ ಮೊತ್ತವೆಷ್ಟು? ಯಾವಾಗ ಈ ಕ್ರೀಡಾಂಗಣವನ್ನು ಪೂರ್ತಿಗೊಳಿಸಲಾಗುವುದು?

ಆ) ಕೇಂದ್ರ ಸರ್ಕಾರದ ಸಹಾಯವನ್ನು ಈ ಕ್ರೀಡಾಂಗಣಕ್ಕೆ ಸರ್ಕಾರ ವಿನಂತಿಸಿದೆಯೇ; ಈ ಕೆಲಸ ಯಾವ ಹಂತದಲ್ಲಿದೆ?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವೆಗಳು ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಈವರೆಗೆ ಪುತ್ತೂರು ಕ್ರೀಡಾಂಗಣಕ್ಕೆ ಜಿಲ್ಲಾ ಪಂಚಾಯತ್ ನಿಂದ ಮಂಜೂರಾದ ಒಟ್ಟು ಮೊತ್ತ ರೂ. 20,25,000 ಖರ್ಚಾದ ಮೊತ್ತ ರೂ. 16,91,385-00, ಕ್ರೀಡಾಂಗಣದ ಬಾಕಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಬೇಕಾಗುವ ರೂ. 48.00 ಲಕ್ಷಗಳನ್ನು ಜಿಲ್ಲಾ ಪಂಚಾಯತಿಯು ಒದಗಿಸಿದ ನಂತರ ಕ್ರೀಡಾಂಗಣ ಪೂರ್ತಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಆ) ಹೌದು. 1996ರಲ್ಲಿ ಕೇಂದ್ರ ಸರ್ಕಾರದ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. 8ನೇ ಪಂಚವಾರ್ಷಿಕ ಯೋಜನೆಯಲ್ಲಿ ಅನುದಾನ ಬಿಡುಗಡೆ ಮಾಡಲು ಸಾಧ್ಯವಿಲ್ಲವೆಂದು ತಿಳಿಸಿ, ಕೇಂದ್ರ ಸರ್ಕಾರವು 9ನೇ ಪಂಚವಾರ್ಷಿಕ ಯೋಜನೆ ಅವಧಿಯಲ್ಲಿ ಪ್ರಸ್ತಾವನೆಯನ್ನು ನವೀಕರಿಸಲು ಸೂಚಿಸಿತ್ತು. ಈಗ ಪರಿಷ್ಕೃತ ಅಂದಾಜು ವೆಚ್ಚಕ್ಕೆ ತಾಂತ್ರಿಕ ಅನುಮೋದನೆ ಪಡೆದು ಹೊಸದಾಗಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು.

ಯಕ್ಷಗಾನ ಕಲಾವಿದರಿಗೆ ಮಾಸಾಶನ

101(219)

ಶ್ರೀ ಸದಾನಂದಗೌಡ ಡಿ.ವಿ. (ಪುತ್ತೂರು): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ?

ಅ) ಯಕ್ಷಗಾನ ರಂಗದಲ್ಲಿ ಈ ತನಕ ಎಷ್ಟು ಕಲಾವಿದರಿಗೆ ಮಾಸಾಶನ, ಗೌರವಧನ ಹಾಗೂ ಇತರ ಸೌಕರ್ಯಗಳನ್ನು ಒದಗಿಸಲಾಗಿದೆ? ಎಷ್ಟು ಕಲಾವಿದರ ಅರ್ಜಿಗಳು ಸರ್ಕಾರದ ಪರಿಶೀಲನೆಯಲ್ಲಿದೆ? ಯಾವಾಗ ಕಡತಗಳನ್ನು ಇತ್ಯರ್ಥಗೊಳಿಸಲಾಗುವುದು?